**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ 02 ಇಎಸ್‌ಟಿ (8) 2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 12-07-2021

# ಹಿಂಬರಹ

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021 ಬೆಂಗಳೂರು ದಿ:21-06-2021ರ ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.

1. ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಇಲಾಖಾ ವೆಬ್‌ಸೈಟ್ ಮುಖಾಂತರ).
2. ಆಯುಕ್ತಾಲಯದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ, ಜಂಟಿ ನಿರ್ದೇಶಕರು (ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (5) ಹಾಗೂ (9), ಸಾರ್ವಜನಿಕ ಸಂಪರ್ಕಾಧಿಕಾರಿ ಮತ್ತು ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಆಪ್ತಶಾಖೆಗೆ.
4. ನಿರ್ದೇಶಕರ ಆಪ್ತಶಾಖೆಗೆ
5. ಆಯುಕ್ತಾಲಯದ ಇಎಸ್‌ಟಿ(8) ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಆಯುಕ್ತಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಆಡಳಿತಾಧಿಕಾರಿ**
**ತಾಂತ್ರಿಕ ಶಿಕ್ಷಣ ಇಲಾಖೆ**

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಶಿಶುಪಾಲನಾ ರಜೆ ಮಂಜೂರು ಮಾಡುವ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ:29.06.2011.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಆದೇಶದಲ್ಲಿ ಬುದ್ದಿಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರದ ಆಧಾರದ ಮೇಲೆ ಕೆಲವು ಷರತ್ತಿಗೊಳಪಟ್ಟು ಒಂದು ವರ್ಷದಲ್ಲಿ ಮೂರು ಕಂತುಗಳಿಗೆ ಮೀರದಂತೆ ಹಾಗೂ 15 ದಿನಗಳಿಗೆ ಕಡಿಮೆ ಇಲ್ಲದಂತೆ ಇಡೀ ಸೇವಾವಧಿಯಲ್ಲಿ ಎರಡು ವರ್ಷಗಳ ಅವಧಿಗೆ ಅಂದರೆ 730 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗಿದೆ.

ಪ್ರಸಕ್ತ ಸರ್ಕಾರವು 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37ರಲ್ಲಿ ರಾಜ್ಯ ಸರ್ಕಾರದ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಘೋಷಿಸಿದ್ದು, ಈ ಕುರಿತಂತೆ ರಾಜ್ಯ ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021 ಬೆಂಗಳೂರು, ದಿನಾಂಕ: 21.06.2021**

ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಈ ಕೆಳಕಂಡ ಷರತ್ತುಗಳ ಮೇರೆಗೆ ಇಡೀ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ "ಶಿಶುಪಾಲನಾ ರಜೆ"ಯನ್ನು, ರಜೆಯನ್ನು ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರವು ಮಂಜೂರು ಮಾಡತಕ್ಕದ್ದು.

i) ಮಹಿಳಾ ಸರ್ಕಾರಿ ನೌಕರಳು ಹೊಂದಿರುವ ಮಕ್ಕಳ ಸಂಖ್ಯೆಯನ್ನು ಪರಿಗಣಿಸದೆ, ಅತ್ಯಂತ ಕಿರಿಯ ಮಗುವು 18 ವರ್ಷ ತಲುಪುವವರೆಗಿನ ಅವಧಿಗೆ ಮಾತ್ರ ಈ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದು.

ii) ಈ ರಜೆಯ ಅವಧಿಯಲ್ಲಿ ಅವಳು ರಜೆಯ ಮೇಲೆ ಹೋಗುವ ನಿಕಟ ಪೂರ್ವದಲ್ಲಿ ಪಡೆಯಲರ್ಹವಿರುವ ಸಂಪೂರ್ಣ ವೇತನಕ್ಕೆ ಸಮನಾದ ರಜೆ ಸಂಬಳಕ್ಕೆ ಅರ್ಹರಾಗತಕ್ಕದ್ದು.

iii) ಪ್ರತಿ ಬಾರಿಯ ಈ ರಜೆ ಮಂಜೂರಾತಿಯು ಕನಿಷ್ಟ 15 ದಿನಗಳಿಗಿಂತ ಕಡಿಮೆ ಇರಬಾರದು.

iv) ಮಹಿಳಾ ಸರ್ಕಾರಿ ನೌಕರಳು ಈ ರಜೆಯನ್ನು ಸಾಂದರ್ಭಿಕ ರಜೆಯ ಹೊರತಾಗಿ, ನಿಯಮಾನುಸಾರ ಪಡೆಯಲರ್ಹವಿರುವ ಅಸಾಧಾರಣ ರಜೆಯೂ ಒಳಗೊಂಡಂತೆ ಇತರೆ ರಜೆಯೊಂದಿಗೆ ಸಂಯೋಜಿಸಿ ಪಡೆಯಬಹುದು.

v) ಈ ರಜೆಯನ್ನು ಯಾವುದೇ ರಜೆ ಲೆಕ್ಕದಿಂದ ಕಳೆಯತಕ್ಕದ್ದಲ್ಲ. ಉಪಯೋಗಿಸಿಕೊಳ್ಳದ ಈ ಸೌಲಭ್ಯದ ಸಂಬಂಧದಲ್ಲಿನ ರಜೆಯನ್ನು ಗಳಿಕೆ ರಜೆ ಲೆಕ್ಕಕ್ಕೆ ಜಮೆಗೊಳಿಸಲು/ನಗದೀಕರಿಸಲು ಅವಕಾಶವಿರುವುದಿಲ್ಲ.

vi) ಬುದ್ದಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನಾ ರಜೆ ಸೌಲಭ್ಯಕ್ಕೆ ಅರ್ಹರಾದ ಯಾವುದೇ ನೌಕರಳು ಆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು. ಅದರೊಂದಿಗೆ ಈ ಯೋಜನೆಯಡಿಯಲ್ಲಿನ ಸೌಲಭ್ಯಕ್ಕೂ ಅರ್ಹರಾಗತಕ್ಕದ್ದಲ್ಲ.

vii) ಶಿಶುಪಾಲನಾ ರಜೆಯ ಮಂಜೂರಾತಿಗಾಗಿ ಯಾವುದೇ ಪೂರಕ ದಾಖಲೆಗಳನ್ನು ಪಡೆಯುವ ಅವಶ್ಯಕತೆಯಿರುವುದಿಲ್ಲ. ಸೇವಾ ಪುಸ್ತಕದಲ್ಲಿ ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ಮಂಜೂರು ಮಾಡತಕ್ಕದ್ದು.

...2/-

viii) ಈ ಪೂರ್ವದಲ್ಲಿ ಮಂಜೂರಾಗಿರುವ ಯಾವುದೇ ಬಗೆಯ ರಜೆಯನ್ನು ಶಿಶುಪಾಲನಾ ರಜೆಯಾಗಿ ಪರಿವರ್ತಿಸತಕ್ಕದ್ದಲ್ಲ. ಈ ಆದೇಶದಡಿಯಲ್ಲಿನ ಸೌಲಭ್ಯವು ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೊಳ್ಳತಕ್ಕದ್ದು.

ix) ಈ ರಜೆಯನ್ನು ಮಂಜೂರು ಮಾಡುವ ಸಕ್ಷಮವಾದ ಪ್ರಾಧಿಕಾರವು ಶಿಶುಪಾಲನಾ ರಜೆಯ ಮಂಜೂರಾತಿಯನ್ನು ಸೇವಾ ಪುಸ್ತಕದಲ್ಲಿ ದಾಖಲು ಮಾಡುವುದು ಮತ್ತು ನಿಗಧಿತ ನಮೂನೆಯಲ್ಲಿ ಲೆಕ್ಕವಿಡಬೇಕು.(ವಿಶೇಷ ಮಕ್ಕಳ ಶಿಶುಪಾಲನಾ ರಜೆಯ ಲೆಕ್ಕವನ್ನಿಡುವ ಪ್ರಪತ್ರದ ಮಾದರಿಯಲ್ಲಿ)

ಈ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳಿಗೆ ಪ್ರತ್ಯೇಕವಾಗಿ ಸೂಕ್ತ ತಿದ್ದುಪಡಿ ತರಲಾಗುವುದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

Suvarna
**(ಬಿ.ಎಸ್.ಸುವರ್ಣ),**
ಸರ್ಕಾರದ ಉಪ ಕಾರ್ಯದರ್ಶಿ,
**ಆರ್ಥಿಕ ಇಲಾಖೆ (ಸೇವೆಗಳು-1).**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು **ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.**

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
2. ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
3. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್‌ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

**[ಕ್ರಮ ಸಂಖ್ಯೆ:1 ರಿಂದ 3 ಹಾಗೂ 10 ರಿಂದ 17 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].**

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.**